# ಕರ್ನಾಟಕ ವಿಧಾನ ಪರಿಷತ್ತು

| | | |
|---|---|---|
| ಚುಕ್ಕೆ ಗುರುತಿಲ್ಲದ ಪ್ರಶ್ನೆ ಸಂಖ್ಯೆ | : | 371 (441) |
| ಸದಸ್ಯರ ಹೆಸರು | : | ಶ್ರೀ ಎಸ್. ನಾಗರಾಜ್ (ಸಂದೇಶ್ ನಾಗರಾಜ್) (ಸ್ಥಳೀಯ ಸಂಸ್ಥೆಗಳ ಕ್ಷೇತ್ರ) |
| ಉತ್ತರಿಸುವ ದಿನಾಂಕ | : | 06.03.2020 |
| ಉತ್ತರಿಸುವವರು | : | ಮಾನ್ಯ ಗ್ರಾಮೀಣಾಭಿವೃದ್ಧಿ ಮತ್ತು ಪಂಚಾಯತ್ ರಾಜ್ ಸಚಿವರು |

| ಕ್ರ.ಸಂ | ಪ್ರಶ್ನೆ | ಉತ್ತರ |
|---|---|---|
| (ಅ) | ಗುಂಡ್ಲುಪೇಟೆ ತಾಲ್ಲೂಕು, ಬೇಗೂರು ಕೆರೆಗೆ ಕೊಳಚೆ ನೀರು ಸೇರಿ ದುರ್ವಾಸನೆ ಬರುತ್ತಿರುವುದು, ಕ್ರಿಮಿಕೀಟಗಳ ಹಾವಳಿಯಿಂದ ಜನರಿಗೆ ತೊಂದರೆ ಆಗಿರುವುದು ಸರ್ಕಾರದ ಗಮನಕ್ಕೆ ಬಂದಿದೆಯೇ; | ಸರ್ಕಾರದ ಗಮನಕ್ಕೆ ಬಂದಿರುತ್ತದೆ. |
| (ಆ) | ಕೆರೆ ಸಮೀಪ ಇರುವ ಪ್ರಾಥಮಿಕ ಆರೋಗ್ಯ ಕೇಂದ್ರ, ಬಸ್‌ನಿಲ್ದಾಣ, ಚುಜ್ಜಲಪ್ಪನ ದೇವಾಲಯವರೆಗೆ ದುರ್ವಾಸನೆ ಬರುತ್ತಿದ್ದು, ಜನಗಳ ಆರೋಗ್ಯದ ಮೇಲೆ ಪರಿಣಾಮ ಬೀರುವುದರಿಂದ, ಕೊಳಚೆ ನೀರು ಕೆರೆಗೆ ಹರಿಯದಂತೆ ತಡೆಗಟ್ಟಲಾಗುವುದೇ; ಹಾಗೂ ಕೆರೆಯನ್ನು ಪುನಶ್ಚೇತನಗೊಳಿಸಿ, ಹೊಸದಾಗಿ ನದಿ ಮೂಲದಿಂದ ನೀರು ತುಂಬಿಸಲಾಗುವುದೇ? | ಗುಂಡ್ಲುಪೇಟೆ ತಾಲ್ಲೂಕು ಬೇಗೂರು ಗ್ರಾ.ಪಂ. ವ್ಯಾಪ್ತಿಯ ಬೇಗೂರು ಕೆರೆಗೆ ಕೊಳಚೆ ನೀರಿನಿಂದ ಮಲಿನವಾಗುತ್ತಿರುವ ಬಗ್ಗೆ ಪತ್ರಿಕೆಯಲ್ಲಿ ಪ್ರಕಟಣೆಯಾಗಿರುತ್ತದೆ. ಈ ಕುರಿತು ಗ್ರಾಮ ಪಂಚಾಯಿತಿ ವತಿಯಿಂದ ಕೆರೆಯ ಅಕ್ಕಪಕ್ಕ ಸ್ವಚ್ಛಗೊಳಿಸಿ ಹಾಗೂ ಪ್ರತಿ 3 ದಿನಗಳಿಗೊಮ್ಮೆ ಕಸವನ್ನು ಹೊರಗಡೆ ಸಾಗಿಸುವ ಮೂಲಕ ಕೆರೆಯನ್ನು ಸ್ವಚ್ಛವಾಗಿರಿಸಲು ಅಗತ್ಯ ಕ್ರಮವಹಿಸಲಾಗುತ್ತಿದೆ. |

(ಕೆ.ಎಸ್. ಈಶ್ವರಪ್ಪ)
ಗ್ರಾಮೀಣಾಭಿವೃದ್ಧಿ ಮತ್ತು ಪಂಚಾಯತ್ ರಾಜ್ ಸಚಿವರು